ಪಿ ಡಬ್ಲ್ಯೂ: 1

ದಿನಾಂಕ 26-09-2025 ರಂದು ಸಾಕ್ಷಿಯನ್ನು ಕರೆಯಿಸಿ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

**ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರಿಂದಃ**

ದಾವೆಯಲ್ಲಿ ಪಂಚಾಯತಿ ಅಧಿಕಾರಿಗಳನ್ನು ಪಕ್ಷಗಾರರನ್ನಾಗಿ ಮಾಡಿರುತ್ತೀರಾ ಎಂದರೆ ಇಲ್ಲ. ಆಸ್ತಿಯನ್ನು ದಿನಾಂಕ 24-09-1980 ರಲ್ಲಿ ಖರೀದಿ ಮಾಡಿರುತ್ತೇನೆ. ಪ್ರತಿವಾದಿಯರ ಆಸ್ತಿ ಪೂರ್ವ-ಪಶ್ಚಿಮ 45 ಅಡಿ, ಉತ್ತರ-ದಕ್ಷಿಣ 42 ಅಡಿ ಇರುತ್ತದೆ ಎಂದರೆ ಸರಿ. ನಮ್ಮ ಮನೆಯ ಸುತ್ತ ಮುತ್ತ ಯಾವುದೇ ಸೆಟ್ ಬ್ಯಾಕ್ ಬಿಟ್ಟಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಅನಧಿಕೃತವಾಗಿ ಪ್ರತಿವಾದಿಯರ 3 ಅಡಿ ಜಾಗವನ್ನು ಒತ್ತುವರಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನನ್ನ ಆಸ್ತಿಯು ಪೂರ್ವ-ಪಶ್ಚಿಮ 21 ಅಡಿ, ಉತ್ತರ-ದಕ್ಷಿಣ 40 ಅಡಿ ಇರುತ್ತದೆ. ಖರೀದಿ ಪತ್ರದಲ್ಲಿ ಸುಳ್ಳು ಅಳತೆ ಬರೆಸಿರುತ್ತೀರಾ ಎಂದರೆ ಸರಿಯಲ್ಲ. ನ್ಯಾಯಾಲಯದ ಮುಂದೆ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿರುತ್ತೀರಾ ಎಂದರೆ ಸರಿಯಲ್ಲ. ಪ್ರತಿವಾದಿಯರು ಅವರ ಮಾಲ್ಕೀ ಆಸ್ತಿಯನ್ನು ಮಾತ್ರ ಉಪಯೋಗಿಸುತ್ತಿದ್ದಾರೆ ಎಂದರೆ ಸರಿಯಲ್ಲ. ನಮ್ಮ ಆಸ್ತಿಯಲ್ಲಿ ಜಾಗ ಬಿಡದೇ ಕಿಟಕಿ ಹಾಕಲು ಅಡ್ಡಿಪಡಿಸಿರುತ್ತಾರೆ ಎಂದು ಸುಳ್ಳು ನುಡಿಯುತ್ತಿದ್ದೀರಾ ಎಂದರೆ ಸರಿಯಲ್ಲ. ಪ್ರತಿವಾದಿಯರಿಗೆ ತೊಂದರೆ ಕೊಡಲು ಸುಳ್ಳು ದಾವೆ ಹೂಡಿರುತ್ತೀರಾ ಎಂದರೆ ಸರಿಯಲ್ಲ. ಪಂಚಾಯತಿಯವರ ಕಡೆಯಿಂದ ಸುಳ್ಳು ದಾಖಲೆ ಸೃಷ್ಟಿಸಿಕೊಂಡು ದಾವೆ ಹೂಡಿರುತ್ತೀರಾ ಎಂದರೆ ಸರಿಯಲ್ಲ. ನಮ್ಮ ಆಸ್ತಿ 21 )(35 ಫೂಟು ಅಷ್ಟೇ ಇರುತ್ತದೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

ತೆ.ನ್ಯಾದಲ್ಲಿ ಬೆ.ಮಾಡಲಾಯಿತು. ನನ್ನ ಸಮಕ್ಷಮ

ಸಹಿ

ಓ ಹೇ ಕೆ ಸರಿ ಇದೆ. C/c.ಪ್ರಧಾನ ದಿವಾಣಿ ನ್ಯಾಯಾಧೀಶರು,

ರಾಣೇಬೆನ್ನೂರು.